ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಆಸ್ತಿಗಳ ಕುರಿತು

ಶ್ರೀ ಕಾಂತರಾಜ್(ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

674 (852) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಯಾವಾಗ, ಎಲ್ಲಿ ಪ್ರಾರಂಭಿಸಲಾಯಿತು; ಇದರ ಇತಿಹಾಸ ಹಾಗೂ ಧ್ಯೇಯೋದ್ದೇಶಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಆಸ್ತಿಗಳು ಯಾವುವು; ಅವುಗಳು ಎಲ್ಲಿವೆ; ಅವುಗಳ ಇಂದಿನ ಮೌಲ್ಯವೇನು; ಇದರ ಮೇಲೆ ಸರ್ಕಾರದ ಹೊಣೆಗಾರಿಕೆ ಎಷ್ಟಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಸದರಿ ಮಂಡಳಿಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಯಾವ ಯಾವ ಯೋಜನೆಗಳಡಿ ಎಷ್ಟು ಹಣ ಬಿಡುಗಡೆಯಾಗಿದೆ; ಇದರಲ್ಲಿ ಸಹಾಯಧನವೆಷ್ಟು; (ವಿವರವಾದ ಮಾಹಿತಿ ನೀಡುವುದು)

(ಈ) ಈ ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅನುಮೋದನೆಗೊಂಡ ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ಭರ್ತಿ ಆಗಿರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು? (ವಿವರವಾಗಿ ಹುದ್ದೆಯ ಪದನಾಮ, ವೇತನ ಶ್ರೇಣಿ, ವಿದ್ಯಾರ್ಹತೆ, ಆಯ್ಕೆ ಮಾದರಿ, ಹುದ್ದೆವಾರು ವಿವರವಾದ ಸಂಪೂರ್ಣ ಮಾಹಿತಿ ನೀಡುವುದು)